**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 103 ಗ್ರಾಪಂಸಿ 2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:08-11-2017

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತಿಗಳು,

ಮಾನ್ಯರೆ,

**ವಿಷಯ:** ರಾಜ್ಯದ ಗ್ರಾಮ ಪಂಚಾಯತಿಗಳ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳ ಆಯ್ಕೆ ಮತ್ತು ನೇಮಕಾತಿಗಾಗಿ ಅರ್ಜಿ ಮತ್ತು ವೇಳಾ ಪಟ್ಟಿ ವಿವರ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 103 ಗ್ರಾಪಂಸಿ 2016, ಬೆಂಗಳೂರು. ದಿನಾಂಕ: 02-11-2017.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಹೊಸದಾಗಿ ಒಂದು ಡಾಟಾ ಎಂಟ್ರಿ ಆಪರೇಟರ್ ಹುದ್ದೆ ಸೃಜಿಸಿ ನೇಮಕಾತಿ ವಿಧಾನ ನಿರ್ದಿಷ್ಟಪಡಿಸಲಾಗಿದೆ. ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳ ಆಯ್ಕೆ ಮತ್ತು ನೇಮಕಾತಿಗಾಗಿ ಅರ್ಜಿ ನಮೂನೆ ಮತ್ತು ವೇಳಾ ಪಟ್ಟಿ ಹಾಗೂ ಪತ್ರಿಕಾ ಪ್ರಕಟಣೆ ವಿವರವನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿದೆ. ಸದರಿ ವೇಳಾ ಪಟ್ಟಿಯಂತೆ ಮತ್ತು ಉಲ್ಲೇಖಿತ ಸರ್ಕಾರದ ಆದೇಶದಂತೆ ಗ್ರಾಮ ಪಂಚಾಯತಿಗಳ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ನಿಗದಿತ ಅವಧಿಯೊಳಗೆ ಆಯ್ಕೆ ಮಾಡಿ ನೇಮಕಾತಿ ಮಾಡಲು ಎಲ್ಲಾ ಅವಶ್ಯ ಕ್ರಮ ಕೈಗೊಳ್ಳಲು ಈ ಮೂಲಕ ತಮ್ಮನ್ನು ಕೋರಿದೆ.

ತಮ್ಮ ನಂಬುಗೆಯ,

8/11/17

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.**

1) ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು
2) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
3) ವಿಶೇಷ ಅಧಿಕಾರಿ, ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರಿಗೆ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.

## ರಾಜ್ಯದ ಗ್ರಾಮ ಪಂಚಾಯತಿಗಳ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳ ಆಯ್ಕೆ ಮತ್ತು ನೇಮಕಾತಿಗಾಗಿ ವೇಳಾ ಪಟ್ಟಿ ವಿವರ

| ಕ್ರಮ ಸಂಖ್ಯೆ | ವಿಷಯ | ನಿಗದಿಪಡಿಸಿರುವ ಸಮಯ |
|---|---|---|
| 1. | ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯು ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳುವ ಬಗ್ಗೆ ತಾಲ್ಲೂಕು/ಜಿಲ್ಲೆಯಲ್ಲಿ ಹೆಚ್ಚಿನ ಪ್ರಸಾರವಿರುವ ಎರಡು ದಿನ ಪತ್ರಿಕೆ (ರಾಜ್ಯ ಮಟ್ಟದ ಒಂದು ಮತ್ತು ಸ್ಥಳೀಯ ಮಟ್ಟದ ಒಂದು) ಅವುಗಳಲ್ಲಿ ಒಂದು ಕನ್ನಡ ದಿನಪತ್ರಿಕೆಯಲ್ಲಾದರೂ ಜಾಹೀರಾತನ್ನು ನೀಡಿ ಅರ್ಜಿಗಳನ್ನು ಆಹ್ವಾನಿಸಬೇಕು. | ದಿನಾಂಕ:15-11-2017 ರೊಳಗೆ |
| 2. | ಅಭ್ಯರ್ಥಿಗಳು ಅರ್ಜಿಗಳನ್ನು ಶುಲ್ಕ ರೂ.150/- ರ ಡಿ.ಡಿ. ಅಥವಾ ಪೋಸ್ಟಲ್ ಆರ್ಡರ್ ಮೂಲಕ ಗ್ರಾಮ ಪಂಚಾಯತಿಗೆ ಸಲ್ಲಿಸುವುದು. | ನೇಮಕಾತಿ ಪ್ರಕಟಣೆ ಹೊರಡಿಸಿದ ದಿನಾಂಕದಿಂದ 15 ದಿನಗಳು |
| 3. | ಸ್ವೀಕೃತಗೊಂಡ ಅರ್ಜಿಗಳನ್ನು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಪರಿಶೀಲಿಸುವುದು ಹಾಗೂ ಮೆರಿಟ್ ಆಧಾರದ ಮೇಲೆ ತಾತ್ಕಾಲಿಕ ಆಯ್ಕೆ ಪಟ್ಟಿ ಸಿದ್ದಪಡಿಸಿ ಗ್ರಾಮ ಪಂಚಾಯತಿ ಸಾಮಾನ್ಯ / ವಿಶೇಷ ಸಭೆ ಅನುಮೋದನೆ ಪಡೆಯುವುದು | ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದಿ 10 ದಿನಗಳು |
| 4. | ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಮೆರಿಟ್ ಆಧಾರದ ಮೇಲೆ ಸಿದ್ದಪಡಿಸಿದ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಗ್ರಾಮ ಪಂಚಾಯಿತಿಯ ಅನುಮೋದನೆ ಪಡೆದ ನಂತರ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಅನುಮೋದನೆಗಾಗಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮೂಲಕ ಪ್ರಸ್ತಾವನೆ ಸಲ್ಲಿಸುವುದು. | ಗ್ರಾಮ ಪಂಚಾಯತಿ ಸಭೆ ಅನುಮೋದನೆಯಾದ ದಿನಾಂಕದಿಂದ 2 ದಿನಗಳು |
| 5. | ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಅರ್ಜಿ ಮತ್ತು ಅಂಕ ಪಟ್ಟಿಗಳನ್ನು ಪರಿಶೀಲಿಸಿ ಪ್ರತಿ ಗ್ರಾಮ ಪಂಚಾಯತಿಯ ಪ್ರಸ್ತಾವನೆಗಳನ್ನು ಪ್ರತ್ಯೇಕವಾಗಿ ವಿಂಗಡಿಸಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರವರ ಅಧ್ಯಕ್ಷತೆಯ ಸಮಿತಿ ಮುಂದೆ ಮಂಡಿಸುವುದು. | ಗ್ರಾಮ ಪಂಚಾಯತಿಯಿಂದ ಪ್ರಸ್ತಾವನೆ ಸ್ವೀಕೃತವಾದ ದಿನಾಂಕದಿಂದ 3 ದಿನಗಳು |
| 6. | ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯು ಸಂಬಂಧಿಸಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ, ಸಂಬಂಧಿಸಿದ ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಸಂಬಂಧಿತ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನೊಳಗೊಂಡ ಸಮಿತಿಯಲ್ಲಿ ಪರಿಶೀಲಿಸಿ ಮೆರಿಟ್ ಆಧಾರದ ಮೇಲೆ ಕ್ರಮ ಸಂಖ್ಯೆ 1 ರಿಂದ 5 ರವರೆಗೆ ಅಭ್ಯರ್ಥಿಗಳನ್ನೊಳಗೊಂಡ ಅಂತಿಮ ಆಯ್ಕೆ ಪಟ್ಟಿ ಸಿದ್ದಪಡಿಸಿ ಅನುಮೋದನೆ ನೀಡಬೇಕು. | 7 ದಿನಗಳು |
| 7. | ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಅಧ್ಯಕ್ಷತೆಯ ಸಮಿತಿಯಲ್ಲಿ ಅನುಮೋದನೆಯಾದ ಆಯ್ಕೆಪಟ್ಟಿಯಲ್ಲಿನ ಕ್ರಮ ಸಂಖ್ಯೆ 1 ರ ಅಭ್ಯರ್ಥಿಗೆ ನೇಮಕಾತಿ ಆದೇಶವನ್ನು ಹೊರಡಿಸುವುದು. | 3 ದಿನಗಳು |
| 8. | ಕ್ರಮ ಸಂಖ್ಯೆ: 1 ರ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾಗಲು ತಪ್ಪಿದಲ್ಲಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯವರ ಅನುಮತಿ ಪಡೆದು ಆಯ್ಕೆ ಪಟ್ಟಿ ಅನುಸಾರ ನಂತರದ ಅಭ್ಯರ್ಥಿಗೆ ನೇಮಕಾತಿ ಆದೇಶ ನೀಡುವುದು. | ಕ್ರಮ ಸಂಖ್ಯೆ: 1 ರ ಅಭ್ಯರ್ಥಿಯು ನೇಮಕಾತಿ ಆದೇಶ ಸ್ವೀಕರಿಸಿದ ನಂತರ 15 ದಿನಗಳೊಳಗೆ ಕರ್ತವ್ಯಕ್ಕೆ ಹಾಜರಾಗದಿದ್ದಲ್ಲಿ. |

8/11

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

# ಅರ್ಜಿ ನಮೂನೆ

## ಗ್ರಾಮ ಪಂಚಾಯತಿ ಡಾಟಾ ಎಂಟ್ರಿ ಆಪರೇಟರ್ ಹುದ್ದೆ ಆಯ್ಕೆ ಮತ್ತು ನೇಮಕಾತಿ ಬಗ್ಗೆ

ಗೆ.

ಪಂಚಾಯತಿ ಅಭಿವೃದ್ಧಿ ಅಧಿಕಾರಿ

___________ ಗ್ರಾಮ ಪಂಚಾಯತಿ

_________ತಾಲ್ಲೂಕು,

_____ ಜಿಲ್ಲೆ.

| ಕ್ರಮ ಸಂಖ್ಯೆ | ವಿವರ | |
|---|---|---|
| 1 | ಅಭ್ಯರ್ಥಿಯ ಹೆಸರು | |
| 2 | ತಂದೆ/ಗಂಡನ ಹೆಸರು | |
| 3 | ಹುಟ್ಟಿದ ದಿನಾಂಕ | |
| 4 | ಲಿಂಗ | |
| 5 | ರಾಷ್ಟ್ರೀಯತೆ | |
| 6 | ವಿದ್ಯಾರ್ಹತೆ (ಧೃಡೀಕೃತ ಪ್ರಮಾಣ ಪತ್ರ ಲಗತ್ತಿಸುವುದು) | |
| 7 | ಕಂಪ್ಯೂಟರ್ ಜ್ಞಾನ/ತರಬೇತಿ ವಿವರ (ಧೃಡೀಕೃತ ಪ್ರಮಾಣ ಪತ್ರ ಲಗತ್ತಿಸುವುದು) | |
| 8 | ಜಾತಿ/ವರ್ಗ (ಧೃಡೀಕೃತ ಪ್ರಮಾಣ ಪತ್ರ ಲಗತ್ತಿಸುವುದು) | |
| 9 | ಪೂರ್ಣ ವಿಳಾಸ (ಮೊಬೈಲ್ ಸಂಖ್ಯೆ ಮತ್ತು ಇಮೇಲ್ ವಿಳಾಸದೊಂದಿಗೆ) | |
| 10 | ಅರ್ಜಿ ಶುಲ್ಕದ ವಿವರ | |

ಸ್ಥಳ:

ದಿನಾಂಕ:

(ಅಭ್ಯರ್ಥಿಯ ಹೆಸರು ಮತ್ತು ಸಹಿ)

____________ ತಾಲ್ಲೂಕು ಪಂಚಾಯತಿ ಕಾರ್ಯಾಲಯ

____________ತಾಲ್ಲೂಕು ಮತ್ತು __________ ಜಿಲ್ಲೆ.

ಸಂಖ್ಯೆ:

ದಿನಾಂಕ:__________

**ಪತ್ರಿಕಾ ಪ್ರಕಟಣೆ**

ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 103 ಗ್ರಾಪಂಸಿ 2016 ದಿನಾಂಕ:02-11-2017 ರಲ್ಲಿ ರಾಜ್ಯದ ಪ್ರತಿ ಗ್ರಾಮ ಪಂಚಾಯತಿಗೆ ಹೊಸದಾಗಿ ಒಂದು ಡಾಟಾ ಎಂಟ್ರಿ ಆಪರೇಟರ್ ಹುದ್ದೆ ಸೃಜಿಸಿ ನೇಮಕಾತಿ ವಿಧಾನ ನಿರ್ದಿಷ್ಟಪಡಿಸಲಾಗಿದೆ. ಸದರಿ ಆದೇಶದನ್ವಯ__________ ತಾಲ್ಲೂಕಿನ __________ ಗ್ರಾಮ ಪಂಚಾಯತಿಗಳಿಗೆ ತಲಾ ಒಂದರಂತೆ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ನೇಮಕ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಅಭ್ಯರ್ಥಿಗಳು ಯಾವ ಗ್ರಾಮ ಪಂಚಾಯತಿಗೆ ಅರ್ಜಿ ಸಲ್ಲಿಸಲು ಬಯಸಿರುವರೋ ಆ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗೆ ಅರ್ಜಿಗಳನ್ನು ನಿಗಧಿತ ಅವಧಿಯೊಳಗೆ ಸಲ್ಲಿಸತಕ್ಕದ್ದು. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ:15-11-2017 ಕೊನೆಯ ದಿನಾಂಕ:30-11-2017 ಆಗಿರುತ್ತದೆ. ಅರ್ಜಿ ಶುಲ್ಕ ರೂ. 150/- ರ ಡಿ.ಡಿ. / ಪೋಸ್ಟಲ್ ಆರ್ಡರ್ ಮೂಲಕ ಪಾವತಿಸುವುದು.

ಸರ್ಕಾರಿ ಆದೇಶದ ಪ್ರತಿ, ಅರ್ಜಿ ನಮೂನೆ ಮತ್ತು ವೇಳಾ ಪಟ್ಟಿ ವಿವರವನ್ನು rdpr.kar.nic.in ನಲ್ಲಿ ಹಾಗೂ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳಿಂದ ಪಡೆಯಬಹುದಾಗಿದೆ.

ಕಾರ್ಯನಿರ್ವಾಹಕ ಅಧಿಕಾರಿ
____________ ತಾಲ್ಲೂಕು ಪಂಚಾಯತಿ.
____________ ಜಿಲ್ಲೆ.